ಮಾಗಡಿ ತಾಲ್ಲೂಕಿನ ಬರ ಸ್ಥಿತಿ

2986 - ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ತಾಲ್ಲೂಕಿನಲ್ಲಿ ಈ ಬಾರಿ ಮಳೆ ಬೀಳದೆ ಜನಸಾಮಾನ್ಯರಿಗೆ, ರೈತರಿಗೆ ಭಾರಿ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಅನಾವೃಷ್ಟಿಯಿಂದ ರೈತರಿಗೆ ಆದ ನಷ್ಟದ ಮೊತ್ತವೆಷ್ಟು?

ಆ) ಮಾಗಡಿ ತಾಲ್ಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಣೆ ಮಾಡಲು ಸರ್ಕಾರವು ನಿರ್ಧರಿಸಿದೆಯೇ? ಹಾಗಿದ್ದಲ್ಲಿ ಯಾವಾಗ ಘೋಷಣೆ ಮಾಡಲಾಗುವುದು, ಇಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?

ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು) :

ಅ) ಮಾಗಡಿ ತಾಲ್ಲೂಕಿನಲ್ಲಿ ವಾಡಿಕೆ ಮಳೆ 280.9 ಮಿ.ಮೀ.ಗೆ ವ್ಯತಿರಿಕ್ತವಾಗಿ 212.8 ಮಿ.ಮೀ. ಮಳೆಯಾಗಿದೆ. ಶೇಕಡಾ 25ರಷ್ಟು ಬಿತ್ತನೆ ಆಗಿದ್ದು, ಉಳಿದ ಬಿತ್ತನೆ ಕಾರ್ಯ ಪ್ರಗತಿಯಲ್ಲಿದೆ. ಅನಾವೃಷ್ಟಿಯಿಂದ ರೈತರಿಗೆ ನಷ್ಟವಾಗಿರುವ ಬಗ್ಗೆ ಯಾವುದೇ ವರದಿಯಾಗಿಲ್ಲ.

ಆ) ಮಾಗಡಿ ತಾಲ್ಲೂಕನ್ನು ಬರಗಾಲ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಲು ಸರ್ಕಾರವು ನಿರ್ಧರಿಸಿಲ್ಲ. ವಾಡಿಕೆ ಮಳೆಗಿಂತ ವಾಸ್ತವವಾಗಿ ಕಡಿಮೆ ಮಳೆ ಬಿದ್ದಿದ್ದರೂ, ತಾಲ್ಲೂಕಿನಲ್ಲಿ ಕುಡಿಯುವ ನೀರು ಮೇವಿನ ಅಭಾವ ಇಲ್ಲದಿರುವುದರಿಂದ, ಸರ್ಕಾರಕ್ಕೆ ಮಾಗಡಿ ತಾಲ್ಲುಕನ್ನು ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸುವುದರ ಬಗ್ಗೆ ಜಿಲ್ಲಾಧಿಕಾರಿಗಳಿಂದ ಯಾವುದೇ ಪ್ರಸ್ತಾವನೆ ಕೂಡ ಬಂದಿಲ್ಲ.

ಕುಮ್ಮಿಸೊಪ್ಪಿನ ಬೆಟ್ಟ, ಬಾಣೆ ಮತ್ತು ಜಮ್ಮಾ ಭೂಮಿ ಸಕ್ರಮ ಕುರಿತು

2989 - ಶ್ರೀ ಹೆಚ್. ಡಿ. ಬಸವರಾಜ್ (ವಿರಾಜಪೇಟೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮ್ಮಿಸೊಪ್ಪಿನ ಬೆಟ್ಟ, ಬಾಣೆ ಮತ್ತು ಜಮ್ಮಾ ಭೂಮಿ ಸಕ್ರಮಗೊಳಿಸುವ ಬಗ್ಗೆ ಸರ್ಕಾರವು ಯಾವ ನಿರ್ಧಾರ ಕೈಗೊಂಡಿದೆ?

ಆ) ಹಾಗಿಲ್ಲದಿದ್ದಲ್ಲಿ ಈ ಬಗ್ಗೆ ಸಕ್ರಮಗೊಳಿಸಲು ಸರ್ಕಾರವು ಕೈಗೊಳ್ಳಲಿರುವ ಕ್ರಮವೇನು?

ಶ್ರೀ ರಮೇಶ್.ಸಿ. ಜಿಗಜಿಣಗಿ (ಕಂದಾಯ ಸಚಿವರು) :

ಅ) ಇಂತಹ ಜಮೀನುಗಳ ಸಕ್ರಮಗೊಳಿಸಲು ಬಗ್ಗೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ. ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

2989 - ಶ್ರೀ ಹೆಚ್. ಡಿ. ಬಸವರಾಜ್ (ವಿರಾಜಪೇಟೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕುಮ್ಮಿಸೊಪ್ಪಿನ ಬೆಟ್ಟ, ಬಾಣೆ ಮತ್ತು ಜಮ್ಮಾ ಭೂಮಿ ಸಕ್ರಮಗೊಳಿಸುವ ಬಗ್ಗೆ ಸರ್ಕಾರವು ಯಾವ ನಿರ್ಧಾರ ಕೈಗೊಂಡಿದೆ?*

ಆ) *ಹಾಗಿಲ್ಲದಿದ್ದಲ್ಲಿ ಈ ಬಗ್ಗೆ ಸಕ್ರಮಗೊಳಿಸಲು ಸರ್ಕಾರವು ಕೈಗೊಳ್ಳಲಿರುವ ಕ್ರಮವೇನು?*

ಶ್ರೀ ರಮೇಶ್.ಸಿ. ಜಿಗಜಿಣಗಿ (ಕಂದಾಯ ಸಚಿವರು) :

ಅ) ಇಂತಹ ಜಮೀನುಗಳ ಸಕ್ರಮಗೊಳಿಸಲು ಬಗ್ಗೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ. ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಬುಡಕಟ್ಟು ಜನಾಂಗದವರಿಗೆ ಕೃಷಿ ಪರಿಕರಣ

2990 - ಶ್ರೀ ಹೆಚ್.ಡಿ. ಬಸವರಾಜ್ (ವಿರಾಜಪೇಟೆ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗಿರಿಜನ ಪ್ರದೇಶ ಯೋಜನೆಯಡಿ ಕಳೆದ ಮೂರು ಸಾಲಿನಲ್ಲಿ ಬುಡಕಟ್ಟು ಜನಾಂಗದವರಿಗೆ ಕೃಷಿ ಪರಿಕರಗಳು ಹಾಗೂ ಇತರೆ ಪರಿಕರಗಳನ್ನು ಖರೀದಿಸಲು ಎಷ್ಟು ಅನುದಾನ ನಿಗಧಿಪಡಿಸಲಾಗಿತ್ತು ಮತ್ತು ಅದರಲ್ಲಿ ಎಷ್ಟು ವೆಚ್ಚ ಮಾಡಲಾಗಿದೆ?*

ಆ) *ವೆಚ್ಚ ಮಾಡಲಾಗಿರುವ ಜಿಲ್ಲಾ ಮತ್ತು ತಾಲ್ಲೂಕು ಸ್ಥಳಗಳು ಯಾವು ಯಾವುದು ಮತ್ತು ಎಷ್ಟು ಫಲಾನುಭವಿಗಳು ಇದರ ಪ್ರಯೋಜನ ಪಡೆದಿರುತ್ತಾರೆ?*

ಇ) *ಈ ಬಾಬ್ತಿಗಾಗಿ ವೆಚ್ಚ ಮಾಡಿದ ಹಣ ಬಾಕಿ ಉಳಿದಿದ್ದರೆ ಅದರ ಮೊತ್ತ ಎಷ್ಟು ಮತ್ತು ಅದನ್ನು ಯಾವಾಗ ವೆಚ್ಚ ಮಾಡಲು ಸರ್ಕಾರ ಉದ್ದೇಶಿಸಿದೆ?*

ಶ್ರೀ ಸಿ. ಬೈರೇಗೌಡ (ಕೃಷಿ ಸಚಿವರು) :

ಅ) ಕಳೆದ ಮೂರು ವರ್ಷಗಳಲ್ಲಿ ಸಸ್ಯ ಸಂಗೋಪನಾ ಗಿರಿಜನ ಉಪಯೋಜನೆಯಡಿಯಲ್ಲಿ ಬುಡಕಟ್ಟು ಜನಾಂಗದವರಿಗೆ ಕೃಷಿ ಪರಿಕರಗಳು ಹಾಗೂ ಇತರ ಪರಿಕರಗಳನ್ನು ಒದಗಿಸಲು ಒಟ್ಟು ರೂ. 267.84 ಲಕ್ಷಗಳನ್ನು ನಿಗಧಿಪಡಿಸಲಾಗಿದ್ದು ಇದರಲ್ಲಿ 237.89 ಲಕ್ಷ ರೂಗಳನ್ನು ವೆಚ್ಚ ಮಾಡಲಾಗಿರುತ್ತದೆ.

ಆ) ರಾಜ್ಯದ ಎಲ್ಲಾ ಜಿಲ್ಲೆಗಳ ಎಲ್ಲಾ ತಾಲ್ಲೂಕುಗಳಲ್ಲಿಯೂ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿರುತ್ತದೆ. ಕಳೆದ 3 ವರ್ಷಗಳಲ್ಲಿ ಒಟ್ಟು 15497 ಫಲಾನುಭವಿಗಳು ಇದರ ಪ್ರಯೋಜನವನ್ನು ಪಡೆದಿರುತ್ತಾರೆ.